ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

18

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE 8/4/21

# ಕೋವಿಡ್ ನಿಯಮ ಸಡಿಲಿಕೆ ಆದೇಶ ಮಂಡನೆಗೆ ಸೂಚನೆ

ಪ್ರಜಾವಾಣಿ ವಾರ್ತೆ 8-4-21

ಬೆಂಗಳೂರು: ಕೋವಿಡ್ ನಿಯಮ ಸಡಿಲಿಕೆ ಸಂಬಂಧ ಪದೇ ಪದೇ ಆದೇಶಗಳನ್ನು ಮಾರ್ಪಡಿಸಲಾಗುತ್ತಿದ್ದು, ಸಂಬಂಧಿಸಿದ ಎಲ್ಲಾ ಆದೇಶಗಳನ್ನು ನ್ಯಾಯಾಲಯದ ಮುಂದೆ ಮಂಡಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.

ಸಿನಿಮಾ ಮಂದಿರಗಳಲ್ಲಿ ಶೇ 50ರಷ್ಟು ಪ್ರೇಕ್ಷಕರಿಗೆ (ಆಸನಗಳ ಭರ್ತಿ) ಅವಕಾಶ ನೀಡಿದ್ದ ಆದೇಶವನ್ನು ಮತ್ತೆ ಬದಲಾಯಿಸಿ ಏ.7ರ ತನಕ ಶೇ 100ರಷ್ಟು ಆಸನಗಳ ಭರ್ತಿಗೆ ಅವಕಾಶ ನೀಡಲಾಯಿತು. ಜಿಮ್‌ಗಳನ್ನು ಮುಚ್ಚಬೇಕು ಎಂಬ ಆದೇಶವನ್ನೂ ಸಡಿಲಿಸಲಾಗಿದೆ. ಎಲ್ಲಾ ಆದೇಶಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು ಎಂದು ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕಾ ನೇತೃತ್ವದ ವಿಭಾಗೀಯ ಪೀಠ ಸರ್ಕಾರಕ್ಕೆ ಬುಧವಾರ ನಿರ್ದೇಶನ ನೀಡಿತು.

ಅಪಾರ್ಟ್‌ಮೆಂಟ್‌ಗಳು, ಹೋಟೆಲ್, ರೆಸ್ಟೋರೆಂಟ್, ಸಿನಿಮಾ ಮಂದಿರ, ಬಾರ್, ಜಿಮ್ ಹಾಗೂ ಇನ್ನಿತರ ಸಾರ್ವಜನಿಕ ಪ್ರದೇಶಗಳಲ್ಲಿ ಸರ್ಕಾರದ ಆದೇಶಗಳನ್ನು ಪಾಲಿಸಲಾಗುತ್ತಿದೆಯೇ ಎಂಬುದರ ಕುರಿತು ದಿಢೀರ್ ತಪಾಸಣೆ ನಡೆಸುವಂತೆ ಬಿಬಿಎಂಪಿಗೆ ಪೀಠ ನಿರ್ದೇಶನ ನೀಡಿತು.

'ರಾಜ್ಯದಲ್ಲಿ ಅದರಲ್ಲೂ ಬೆಂಗಳೂರಿನಲ್ಲಿ ಕೋವಿಡ್ ಪ್ರಕರಣ ಏರಿಕೆಯಾಗುತ್ತಿದೆ. ಒಳಾಂಗಣ ಮತ್ತು ಹೊರಾಂಗಣ ಕಾರ್ಯಕ್ರಮಗಳಿಗೆ ಸರ್ಕಾರ ನಿಗದಿ ಮಾಡಿರುವಷ್ಟೇ ಜನರು ಭಾಗವಹಿಸುತ್ತಿದ್ದಾರೆಯೇ ಪರಿಶೀಲಿಸಬೇಕು. ಅಗತ್ಯ ಇದ್ದರೆ ಜನರ ಸಂಖ್ಯೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಮಾರ್ಪಡಿಸಿದ ಆದೇಶ ಹೊರಡಿಸಬೇಕು' ಎಂದು ಸೂಚಿಸಿತು. ವಿಚಾರಣೆಯನ್ನು ಏ.15ಕ್ಕೆ ಮುಂದೂಡಿತು.

## ಕೆಲಸದ ಸ್ಥಳದಲ್ಲೇ ಲಸಿಕೆ



ನವದೆಹಲಿ: ಕೆಲಸದ ಸ್ಥಳಗಳಲ್ಲಿಯೇ ಕೋವಿಡ್–19 ತಡೆ ಲಸಿಕೆ ಹಾಕಿಸಿಕೊಳ್ಳಲು ಸರ್ಕಾರ ಅವಕಾಶ ಕೊಟ್ಟಿದೆ. ಇದು ಖಾಸಗಿ ಮತ್ತು ಸರ್ಕಾರಿ ಸಂಸ್ಥೆಗಳಿಗೆ ಅನ್ವಯ. ಆದರೆ, ಲಸಿಕೆ ಪಡೆಯಲು ಅರ್ಹರಾದ ನೂರಕ್ಕೂ ಹೆಚ್ಚು ಮಂದಿ ಇರಬೇಕು. ಭಾನುವಾರದಿಂದ (ಏಪ್ರಿಲ್ 11) ಇದು ಜಾರಿಗೆ ಬರಲಿದೆ. ಸಂಸ್ಥೆಯಲ್ಲಿ ಕೆಲಸ ಮಾಡುವವರಿಗೆ ಮಾತ್ರ ಇದು ಅನ್ವಯ. ಅವರ ಕುಟುಂಬದ ಸದಸ್ಯರು ಕೆಲಸದ ಸ್ಥಳದಲ್ಲಿ ಲಸಿಕೆ ಹಾಕಿಸಿಕೊಳ್ಳಲು ಅವಕಾಶ ಇಲ್ಲ.

ಇಂತಹ ಲಸಿಕೆ ಶಿಬಿರಗಳನ್ನು ನಡೆಸುವ ವಿವರವಾದ ಮಾರ್ಗಸೂಚಿಯನ್ನು ಕೇಂದ್ರವು ರಾಜ್ಯಗಳಿಗೆ ಕಳುಹಿಸಿಕೊಟ್ಟಿದೆ. ಜಿಲ್ಲಾಧಿಕಾರಿ ನೇತೃತ್ವದ ಜಿಲ್ಲಾ ಕಾರ್ಯಪಡೆ ಮತ್ತು ನಗರಪಾಲಿಕೆ ಆಯುಕ್ತರ ನೇತೃತ್ವದ ನಗರ ಕಾರ್ಯಪಡೆಯು ಲಸಿಕೆ ಶಿಬಿರ ಆಯೋಜಿಸಬಹುದಾದ ಸಂಸ್ಥೆಗಳನ್ನು ಗುರುತಿಸಲಿದೆ. ಜಿಲ್ಲಾ ಆರೋಗ್ಯ ಅಧಿಕಾರಿಗಳ ಜತೆಗೆ ಸಮನ್ವಯಕ್ಕಾಗಿ ಸಂಸ್ಥೆಯು ಲಸಿಕೆ ಶಿಬಿರಕ್ಕೆ ಒಬ್ಬ ನೋಡಲ್ ಅಧಿಕಾರಿಯನ್ನು ನಿಯೋಜಿಸಬೇಕು.

**1.15 ಲಕ್ಷ ಪ್ರಕರಣ:** ಬುಧವಾರ ಬೆಳಗ್ಗಿನ ವರೆಗಿನ 24 ತಾಸು ಅವಧಿಯಲ್ಲಿ ದೇಶದಲ್ಲಿ ಈವರೆಗಿನ ಗರಿಷ್ಠ ಸಂಖ್ಯೆಯ ಕೋವಿಡ್ ಪ್ರಕರಣಗಳು ಪತ್ತೆಯಾಗಿವೆ. 1.15 ಲಕ್ಷ ಪ್ರಕರಣಗಳು ದೃಢಪಟ್ಟಿವೆ. ಈ ಅವಧಿಯಲ್ಲಿ ಮೃತಪಟ್ಟವರ ಸಂಖ್ಯೆ 630. ದೇಶದ ಒಟ್ಟು ಕೋವಿಡ್ ಪ್ರಕರಣಗಳ ಸಂಖ್ಯೆಯು 1.28 ಕೋಟಿಗೆ ಏರಿಕೆಯಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ.

**ಒಬ್ಬರೇ ಇದ್ದರೂ ಮಾಸ್ಕ್ ಕಡ್ಡಾಯ:** ಖಾಸಗಿ ವಾಹನದಲ್ಲಿ ಒಬ್ಬರೇ ಸಂಚರಿಸುವಾಗಲೂ ಮಾಸ್ಕ್ ಧರಿಸುವುದು ಕಡ್ಡಾಯ ಎಂದು ದೆಹಲಿ ಹೈಕೋರ್ಟ್ ಬುಧವಾರ ಹೇಳಿದೆ.

**ದಿನಕ್ಕೆ ಸಾವಿರ ಸಾವು?:** ಕೋವಿಡ್ ಪ್ರಸರಣದ ವೇಗ ಗಮನಿಸಿದರೆ, ಮುಂಬರುವ ವಾರಗಳಲ್ಲಿ ಭಾರತದಲ್ಲಿ ನಿತ್ಯ ಸಾವಿರ ಜನರ ಸಾವು ಸಂಭವಿಸುವ ಸಾಧ್ಯತೆ ಇದೆ. ಅಂತೆಯೇ ದಿನ ಹೊಸ ಪ್ರಕರಣಗಳ ಸಂಖ್ಯೆ ಇನ್ನಷ್ಟು ಹೆಚ್ಚಳವಾಗಲಿದೆ ಎಂದು ಅಮೆರಿಕದ ಮಿಷಿಗನ್ ವಿ.ವಿ ಪ್ರೊ.ಭ್ರಮರ್ ಮುಖರ್ಜಿ ಎಚ್ಚರಿಸಿದ್ದಾರೆ.